ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ರವರ ನ್ಯಾಯಾಲಯ, ಮಳವಳ್ಳಿ.

ಸಿಸಿ ನಂಃ **22/2022**

| | | |
|---|---|---|
| ಹೆಸರು | ಎನ್. ಗೋವಿಂದೇಗೌಡ | ಸಿ.ಡಬ್ಲ್ಯೂ **- 11** |
| ತಂದೆಯ ಹೆಸರು | ನಿಂಗೇಗೌಡ | ಪಿ.ಡಬ್ಲ್ಯೂ **- 9** |
| ವಯಸ್ಸು | 54 ವರ್ಷ | |
| ಉದ್ಯೋಗ | ವ್ಯವಸಾಯ | |
| ವಾಸ ಸ್ಥಳ | ನಿಲುವಾಗಿಲು | |

ಸಾಕ್ಷಿಗೆ ದಿನಾಂಕಃ 25.07.2026 ರಂದು ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಎ ಪಿ ಪಿ ರರಿಂದ ಃ

ಈಗ ನೋಡುತ್ತಿರುವ ದಾಖಲೆಗೆ ಬೆಂಗಳೂರಿನಲ್ಲಿ ಸುಮಾರು 2 ವರ್ಷಗಳ ಹಿಂದೆ ಪೊಲೀಸರು ಹೇಳಿದ ಮೇರೆಗೆ ಸಹಿ ಮಾಡಿರುತ್ತೇನೆ. ಸದರಿ ದಾಖಲೆಯು ಅಮಾನತ್ತು ಪಂಚನಾಮೆಯ ನಿಜ ಪ್ರತಿಯಾಗಿದ್ದು, ಅದನ್ನು ನಿಪಿ 14 ಎಂದು ಗುರುತಿಸಲಾಯಿತು. ಅದರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿರುವುದಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ಒಡವೆಗಳನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ. ಈಗ ನೋಡುತ್ತಿರುವ 3 ಫೋಟೋಗಳಲ್ಲಿ ನನ್ನ ಭಾವಚಿತ್ರ ಇರುತ್ತದೆ. ಸದರಿ ಫೋಟೋಗಳನ್ನು ನಿಪಿ 15 ರಿಂದ 17 ರಂದು ಗುರುತಿಸಲಾಯಿತು. ಸದರಿ ಫೋಟೋಗಳನ್ನು ಯಾವ ಉದ್ದೇಶಕ್ಕೆ ತೆಗೆಸಿರುತ್ತಾರೆ ಎಂದು ನನಗೆ ಗೊತ್ತಿರುವುದಿಲ್ಲ. ನಾನು ಪೊಲೀಸರ ಮುಂದೆ ಹೇಳಿಕೆಯನ್ನು ನೀಡಿರುವುದಿಲ್ಲ.

ಎಪಿಪಿ ಯವರ ವಿನಂತಿ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿಸಲಾಯಿತು.

ಪಾಟೀ ಸವಾಲುಃ ಎ ಪಿ ಪಿ ರವರಿಂದ ಃ

ದಿ: 10.11.2021 ರಂದು ಸುಲುಗೆಯ ಸಂಬಂಧವಾಗಿ ಮದ್ದೂರು ಗ್ರಾಮಾಂತರ ವೃತ್ತ ಕಛೇರಿಯಲ್ಲಿ ನನ್ನ ಮತ್ತು ಚಾಸಾ 12 ರವರ ಸಮಕ್ಷಮ ಪೊಲೀಸರು ಚಾಸಾ 15 ರವರು ಹಾಜರುಪಡಿಸಿದ ಮಾಂಗಲ್ಯ ಸರಕ್ಕೆ ಸಂಬಂಧವಾಗಿ ಬೆಳಿಗ್ಗೆ 11-30 ರಿಂದ 12-15 ರ ಸಮಯದಲ್ಲಿ ನಿಪಿ 14 ರಂತೆ ಅಮಾನತ್ತು ಮಹಜರ್ ಮಾಡಿ, ಮಾಂಗಲ್ಯ ಸರವನ್ನು ಅಮಾನತ್ತು ಪಡಿಸಿಕೊಂಡು ನಿಪಿ 15 ರಿಂದ 17 ರಂತೆ ಫೋಟೋಗಳನ್ನು ತೆಗೆಸಿರುತ್ತಾರೆ ಎಂದರೆ ಸರಿಯಲ್ಲ. ಈ ಸಂಬಂಧವಾಗಿ ಈಗ ಓದಿ ಹೇಳಲಾದಂತೆ ಪೊಲೀಸರ ಮುಂದೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ಅಲ್ಲಗಳೆದ ಕಾರಣ ಅದನ್ನು ನಿಪಿ 18 ಎಂದು ಗುರುತಿಸಲಾಯಿತು. ಎಲ್ಲಾ ಗೊತ್ತಿದ್ದರೂ ಸಹ ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು ಃಆರೋಪಿ ಪರ: ವಕೀಲರಿಂದ</u>

ಪಾಟೀ ಸವಾಲು ಇರುವುದಿಲ್ಲ.

ಮರು ವಿಚಾರಣೆ ಇಲ್ಲ.

ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು.

ಓ ಹೇ ಕೇ ಸ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಮಳವಳ್ಳಿ.